Received on 2/3/2021
WOP.

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/19/2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:02.03.2021.

**ಸುತ್ತೋಲೆ**

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಆಯ್ಕೆಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳ ಮಾಹಿತಿಯನ್ನು ಇಎಂಐಎಸ್ ನಲ್ಲಿ ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ನೇವಿ-1/ಅಉಅ/19/2019-20, ದಿನಾಂಕ:19.01.2021 ಮತ್ತು 21.01.2021.

* * * * * * *

2020-21ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಕೆಲವು ಷರತ್ತು/ನಿಬಂಧನೆಗಳಿಗೊಳಪಟ್ಟು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ. ಅದರಂತೆ, ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ನೇಮಿಸಿಕೊಂಡಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸುವ ಸಂಬಂಧ ಕ್ರಮವಹಿಸಬೇಕಾಗಿದ್ದು, ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ನೇಮಿಸಿಕೊಂಡಿರುವ ಅತಿಥಿ ಉಪನ್ಯಾಸಕರ ಮಾಹಿತಿಯನ್ನು ಇಎಂಐಎಸ್ ನಲ್ಲಿ ಅಪ್‌ಲೋಡ್ ಮಾಡುವಂತೆ ಈ ಮೂಲಕ ಸೂಚಿಸಲಾಗಿದೆ.

2/3/21

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ,**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ & ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಮತ್ತು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

**ಪ್ರತಿಯನ್ನು:**

1. ಮ್ಯಾನೇಜರ್/ಅಧೀಕ್ಷಕರು, ಆಯವ್ಯಯ ವಿಭಾಗ, ಶೈಕ್ಷಣಿಕ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
2. ಕಛೇರಿ ಪ್ರತಿ.